# Science Popularization Program 2022-23

Post Graduate Physics students conducted a popular science program on 09-06-2023 at Karnataka Public School, Chikkanahalli, Sira Taluk, Tumkur District. MSc students prepared their own models and demonstrated more than 50 Physics experiments to the school children.






COORDINATOR
DOSR in Physics
University College of Science
Tumkur University, Tumkur-572103

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103





# ಜನಪ್ರಿಯ ವಿಜ್ಞಾನ ಕಾರ್ಯಕ್ರಮ

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇಲ್ಲಿನ ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗದ ವತಿಯಿಂದ ಜನಪ್ರಿಯ ವಿಜ್ಞಾನ ಕಾರ್ಯಕ್ರಮವನ್ನು ಕರ್ನಾಟಕ ಪಬ್ಲಿಕ್ ಶಾಲೆ, ಚಿಕ್ಕನಹಳ್ಳಿ, ಸಿರಾ ತಾಲೂಕು ಇಲ್ಲಿ ದಿನಾಂಕ 09-06-2023 ರಂದು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಡಾ. ಜಗದೀಶ್, ಪ್ರಾಧ್ಯಾಪಕರು, ಏರೋಸ್ಪೇಸ್ ಇಂಜಿನಿಯರಿಂಗ್ ವಿಭಾಗ, ಭಾರತೀಯ ವಿಜ್ಞಾನ ಸಂಸ್ಥೆ, ಬೆಂಗಳೂರು ಇವರು ಉದ್ಘಾಟಿಸಿದರು. ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗದ ಸಂಯೋಜಕರಾದ ಶ್ರೀ. ಹರೀಶ್ ಕುಮಾರ್ ಕೆ ಇವರು ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕ ಮಾತುಗಳನ್ನಾಡಿದರು. ಕರ್ನಾಟಕ ಪಬ್ಲಿಕ್ ಶಾಲೆಯ ಉಪ ಪ್ರಾಂಶುಪಾಲರಾದ ಶ್ರೀ. ರಂಗನಾಥ್ ಎನ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಜಿಕೆವಿಕೆ ಯ ಶ್ರೀ. ಎ ಆರ್ ಶ್ರೀನಿವಾಸಯ್ಯ, ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕರುಗಳಾದ ಡಾ. ಮಲ್ಲೇಶಪ್ಪ ಜೆ, ಡಾ. ಚೇತನ್ ಪ್ರತಾಪ್ ಕೆ ಎನ್, ಡಾ. ಪಾಲಾಕ್ಷಮೂರ್ತಿ ಬಿ ಎಸ್ ಹಾಗೂ ಜಿಟಿಟಿಐ ಯ ಪ್ರಾಂಶುಪಾಲರಾದ ಶ್ರೀ ತಿಮ್ಮರಾಜು ರವರು ಉಪಸ್ಥಿತರಿದ್ದರು. ಕರ್ನಾಟಕ ಪಬ್ಲಿಕ್ ಶಾಲೆಯ ಶಿಕ್ಷಕರಾದ ಶ್ರೀ ನಾಗಭೂಷಣ ಇವರು ಕಾರ್ಯಕ್ರಮವನ್ನು ನಿರೂಪಿಸಿದರು. ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ಪ್ರಥಮ ಮತ್ತು ದ್ವಿತೀಯ ವರ್ಷದ ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಸುಮಾರು 70ಕ್ಕೂ ಹೆಚ್ಚು ಭೌತಶಾಸ್ತ್ರದ ಪ್ರಯೋಗಗಳನ್ನು ಸದರಿ ಕಾರ್ಯಕ್ರಮದಲ್ಲಿ ಪ್ರಸ್ತುತಪಡಿಸಿದರು. ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮವನ್ನೂ ಏರ್ಪಡಿಸಲಾಗಿತ್ತು.



COORDINATOR
DOSR in Physics
University College of Science
Tumkur Univrsity, Tumkur-572103

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103